# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## **ಚುಕ್ಕೆ ಗುರುತಿನ ಪ್ರಶ್ನೆ**

ದಿನಾಂಕ : 17-03-2021 ಪ್ರಶ್ನೆ ಸಂಖ್ಯೆ : 198 (1276)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 17-03-2021

ಉತ್ತರಿಸುವ ಸಚಿವರು : ಕಂದಾಯ ಸಚಿವರು

ವಿಷಯ : ಉಪನೋಂದಣಾಧಿಕಾರಿಗಳ ಕಛೇರಿಗಳಲ್ಲಿ ನಡೆಯುತ್ತಿರುವ ಅವ್ಯವಹಾರಗಳ ಬಗ್ಗೆ

(ಅ) ಕಳೆದ 3 ವರ್ಷಗಳಲ್ಲಿ ಹಾಸನ ಜಿಲ್ಲೆಯಲ್ಲಿರುವ ಹಿರಿಯ ಉಪನೋಂದಣಾಧಿಕಾರಿ/ಉಪನೋಂದಣಾಧಿಕಾರಿಗಳ ಕಛೇರಿಗಳಲ್ಲಿ ನೋಂದಣಿಯಾದ ನಿವೇಶನಗಳ ಸಂಖ್ಯೆ ಎಷ್ಟು ; ಎಷ್ಟು ಎಕರೆ ಭೂಮಿ ನೋಂದಣಿಯಾಗಿವೆ ; ಇದರಿಂದ ಸರ್ಕಾರಕ್ಕೆ ಬಂದ ಆದಾಯವೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಪರವಾನಗಿ ಹೊಂದಿರದ ಕೆಲವು ಸ್ಟಾಂಪ್ ವೆಂಡರ್‌ಗಳ ನಕಲು ಖಾತೆ ಮತ್ತು ಪಹಣಿಗಳನ್ನು ಸೃಷ್ಟಿಸಿ ಬಹಳಷ್ಟು ನಿವೇಶನ ಮತ್ತು ಜಮೀನುಗಳನ್ನು ಸದರಿ ಕಛೇರಿಯಲ್ಲಿ ನೋಂದಣಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇಂತಹವರ ವಿರುದ್ಧ ಕೈಗೊಂಡಿರುವ ಕ್ರಮಗಳೇನು; (ಪ್ರಕರಣವಾರು ವಿವರ ನೀಡುವುದು)

(ಇ) ಚನ್ನರಾಯಪಟ್ಟಣ ಉಪ ನೋಂದಣಾಧಿಕಾರಿಗಳ ಕಛೇರಿ ವ್ಯಾಪ್ತಿಯಲ್ಲಿ 15 ಜನ ಪತ್ರ ಬರಹಗಾರರಾಗಿ ಕಾರ್ಯನಿರ್ವಹಿಸುತ್ತಿದ್ದು, ಇವರ ಪರವಾನಗಿಯನ್ನು 2018-19ನೇ ಸಾಲಿಗೆ ನವೀಕರಿಸುವಂತೆ ಜಿಲ್ಲಾ ನೋಂದಣಾಧಿಕಾರಿಗಳಿಗೆ ಪತ್ರ ಬರೆದು 3 ವರ್ಷಗಳಾಗಿದ್ದು, ಇಲ್ಲಿಯವರೆಗೆ ಪರವಾನಗಿ ನವೀಕರಣ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಸಂಬಂಧ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)